**ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ**
**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**
**PAPER CLIPPINGS**

11

ಇಲಾಖೆ / ವಿಷಯ : DEPARTMENT / SUBJECT: ಅರಣ್ಯ ಇಲಾಖೆ


ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 11-12-2020

# ಸದನದಲ್ಲಿ ಪ್ರತಿಧ್ವನಿಸಿದ ಕಸ್ತೂರಿರಂಗನ್ ವರದಿ

ವಿಧಾನಸಭೆ: ಪಶ್ಚಿಮಘಟ್ಟ ಸಂರಕ್ಷಣೆ ಕುರಿತ ಡಾ.ಕಸ್ತೂರಿರಂಗನ್ ವರದಿ ಮತ್ತೆ ಸದನದಲ್ಲಿ ಪ್ರತಿಧ್ವನಿಸಿದೆ. ಕರಾವಳಿ ಹಾಗೂ ಮಲೆನಾಡು ಭಾಗದ ಜನರಲ್ಲಿ ಮೂಡಿರುವ ಭಯ ದೂರ ಮಾಡಬೇಕು. ರಾಜ್ಯ ಸರ್ಕಾರ ಸುಪ್ರೀಂಕೋರ್ಟ್ ಅಥವಾ ಹಸಿರು ಪೀಠದ ಮೊರೆ ಹೋಗಬೇಕು ಎಂದು ಆ ಭಾಗದ ಶಾಸಕರು ಒಕ್ಕೊರಲ ಒತ್ತಾಯ ಮಾಡಿದ್ದಾರೆ.

ಡಾ.ಕಸ್ತೂರಿರಂಗನ್ ವರದಿ ತಿರಸ್ಕರಿಸಬೇಕು ಎಂದು ಆಗ್ರಹಿಸಿ ಆ ಭಾಗದ ಜನರು ಗ್ರಾಮ ಪಂಚಾಯಿತಿ ಚುನಾವಣೆ ಬಹಿಷ್ಕರಿಸುವ ಬೆದರಿಕೆಯನ್ನೂ ಹಾಕಿದ್ದಾರೆ. ಡಿ.30 ರೊಳಗೆ ರಾಜ್ಯ ಸರ್ಕಾರ ಹಸಿರು ಪೀಠಕ್ಕೆ ತನ್ನ ನಿಲುವು ತಿಳಿಸಬೇಕಿದೆ. ಇದು ಆ ಭಾಗದ ಜನರ ಜೀವನದ ಪ್ರಶ್ನೆಯಾಗಿದೆ ಎಂದು ಆತಂಕವನ್ನೂ ವ್ಯಕ್ತಪಡಿಸಿದ್ದಾರೆ.

ಸರ್ಕಾರದ ಪರ ಉತ್ತರಿಸಿದ ಸಚಿವ ಸುರೇಶ್ ಕುಮಾರ್, ವರದಿ ವಿಚಾರದಲ್ಲಿ ಆತಂಕ ಪಡುವ ಅಗತ್ಯವಿಲ್ಲ, ಜನಜೀವನ, ಕೃಷಿ ಚಟುವಟಿಕೆಗೆ ತೊಂದರೆ ಆಗದಂತೆ ಸರ್ಕಾರ ಕ್ರಮ ಕೈಗೊಳ್ಳಲಿದೆ. ಯಾರನ್ನೂ ಒಕ್ಕಲೆಬ್ಬಿಸುವ ಪ್ರಶ್ನೆ ಇಲ್ಲ, ಅಭಿವೃದ್ಧಿಗೂ ಅಡ್ಡಿಯಾಗದಂತೆ ನೋಡಿಕೊಳ್ಳುತ್ತೇವೆ. ಅರಣ್ಯ ಹಾಗೂ ಕಾನೂನು ಇಲಾಖೆ ಜತೆ ಮಾತನಾಡಿ ಹಸಿರು ಪೀಠಕ್ಕೆ ಪ್ರಮಾಣಪತ್ರ ಸಲ್ಲಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು. ಅಲ್ಲದೆ, ಗ್ರಾಪಂ ಚುನಾವಣೆ ಬಹಿಷ್ಕಾರ ಇದಕ್ಕೆ ಪರಿಹಾರವಲ್ಲ ಎಂದೂ ಹೇಳಿದರು. ಇದೇ ವೇಳೆ, ಕಾಂಗ್ರೆಸ್, ಜೆಡಿಎಸ್ ಸದಸ್ಯರು ಕಲಾಪ ಬಹಿಷ್ಕರಿಸಿದ ಕಾರಣ, ಅವರು ಈ ಚರ್ಚೆಯಲ್ಲಿ ಭಾಗಿಯಾಗಲಿಲ್ಲ.



- ಹಸಿರುಪೀಠದ ಮೊರೆ ಹೋಗಲು ಸಲಹೆ
- ಆತಂಕಪಡಬೇಡಿ, ನಾವು ಜನರ ಜತೆಗಿದ್ದೇವೆ ಎಂದ ಸರ್ಕಾರ

## ನಿರ್ಲಕ್ಷ್ಯದ ವಿರುದ್ಧ ಆಕ್ರೋಶ

ಡಾ.ಕಸ್ತೂರಿರಂಗನ್ ವರದಿ ಶಿವಮೊಗ್ಗ ಜಿಲ್ಲೆಯ 482ಗ್ರಾಮ, ತೀರ್ಥಹಳ್ಳಿಯ 145 ಗ್ರಾಮ, ಉತ್ತರ ಕನ್ನಡದ 615 ಗ್ರಾಮ, ಶಿರಸಿಯ 124 ಗ್ರಾಮ, ಸಿದ್ದಾಪುರದ 108 ಗ್ರಾಮಗಳಲ್ಲಿ ಆತಂಕ ಮೂಡಿಸಿದೆ. ನಮ್ಮಲ್ಲಿ ಅಧಿಕಾರಿಗಳು ನಿರ್ಲಕ್ಷ್ಯ ತೋರುತ್ತಿದ್ದಾರೆ. ಕೇರಳದಲ್ಲಿ 13108 ಚ.ಕಿ.ಮೀ. ಸೂಕ್ಷ್ಮ ವಲಯ ಎಂದು ಗುರುತಿಸಲಾಗಿತ್ತು. ಅಲ್ಲಿನ ಸರ್ಕಾರ ಗ್ರಾಮಗಳಲ್ಲಿ ಸಭೆ ನಡೆಸಿ ವರದಿ ನೀಡಿದ ಬಳಿಕ 9 ಸಾವಿರ ಚ.ಕಿ.ಮೀ. ಕೈಬಿಡಲಾಗಿದೆ. ರಾಜ್ಯದಲ್ಲಿ 20668 ಚ.ಕಿ.ಮೀ. ಗುರುತಿಸಿದ್ದು ನಾವು ಅದೇ ರೀತಿ ಗಡಿ ಗುರುತಿಸಿ ವರದಿ ಕೊಟ್ಟಿದ್ದರೆ ನಮ್ಮದೂ 13 ಸಾವಿರ ಚ.ಕಿ.ಮೀ.ಗೆ ಕಡಿಮೆ ಆಗುತ್ತಿತ್ತು ಎಂದು ಬಿಜೆಪಿಯ ಅರಗ ಜ್ಞಾನೇಂದ್ರ ಹೇಳಿದರು.

> ನಮ್ಮ ಸಂಸದರು ನಿದ್ದೆ ಮಾಡುತ್ತಿದ್ದಾರೆ. ಕೇಂದ್ರ ಸರ್ಕಾರದ ಬಳಿ ಹೋಗಿ ಪರಿಹಾರ ಕಂಡುಕೊಳ್ಳುವಲ್ಲಿ ವಿಫಲರಾಗಿದ್ದಾರೆ. ಮುಂದೆ ಇವರ ವಿರುದ್ಧ ಜನತೆ ದಂಗೆ ಏಳಲಿದ್ದಾರೆ.

■ ಎಂ.ಪಿ.ಕುಮಾರಸ್ವಾಮಿ, ಬಿಜೆಪಿ ಶಾಸಕ

> ಆ ಭಾಗದ ಜನರಲ್ಲಿ ಸಾಕಷ್ಟು ಗೊಂದಲ ಇದೆ. ಕೆಲವರು ಬೇಕಂತಲೇ ಗೊಂದಲ ಮೂಡಿಸುತ್ತಿದ್ದಾರೆ. ಅದಕ್ಕೆ ಕಡಿವಾಣ ಹಾಕಬೇಕಾದರೆ ಸರ್ಕಾರ ಕೂಡಲೇ ಸೂಕ್ತ ಕ್ರಮ ಕೈಗೊಳ್ಳಬೇಕು.

■ ವಿಶ್ವೇಶ್ವರ ಹೆಗಡೆ ಕಾಗೇರಿ, ಸ್ಪೀಕರ್